ದಿನಾಂಕಃ **27-07-2024** ರಂದು ಸಾಕ್ಷಿಗೆ ಪುನಃ ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ಶ್ರೀಮತಿ ಯುಡಿಕೆ ವಕೀಲರಿಂದಃ

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ನಿಪಿ-1 ಎಂದು ಗುರುತಿಸಲಾಯಿತು.

2. ಅಸಲು ದಾವೆ 177/2012 ಕ್ಕೆ ಸಂಬಂಧಪಟ್ಟಿರುವ ಆರ್ಡರ್ ಶೀಟ್ ಮೆಮೋವನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.

4. ಸರ್ವೆ ನಂ. 44 ಕ್ಕೆ ಸಂಬಂಧಪಟ್ಟಿರುವ ಮಂಜೂರಾತಿ ಪತ್ರ ಮತ್ತು 2 ಪುಟಗಳುಳ್ಳ ಇಂಡೆಕ್ಸ್ ಆಫ್ ಲ್ಯಾಂಡ್ ನ್ನು ನಿಪಿ-4 ಮತ್ತು 5 ಎಂದು ಗುರುತಿಸಲಾಯಿತು.

6. ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ರವರಿಗೆ ಈರಪ್ಪ ರವರು ಕೊಟ್ಟಿರುವ ಡಿಕ್ಲರೇಷನ್ ಫಾರಂ ನ್ನು ನಿಪಿ-6 ಎಂದು ಗುರುತಿಸಲಾಯಿತು.

7. 2 ಆರ್ ಟಿ ಸಿ ಗಳನ್ನು ನಿಪಿ-7 ಮತ್ತು 8 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಶ್ರೀ ಜಿ ಎಸ್ ಪಿ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.